**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**18.03.2026 19.35 hrs**
*******************

ಮುಖ್ಯಾಂಶಗಳು

- ಪಶ್ಚಿಮ ಏಷ್ಯಾ ಸಂಘರ್ಷ ಹಿನ್ನೆಲೆ : ಶಾಂತಿ, ಸ್ಥಿರತೆ ಪುನಃಸ್ಥಾಪನೆಗೆ ಭಾರತ ಮತ್ತು ಯುಎಇ ಜಂಟಿ ಒಪ್ಪಂದ
- ಯುಎಇಯಿಂದ ೮೧ ಸಾವಿರ ಟನ್ ಕಚ್ಚಾ ತೈಲ ಹೊತ್ತುತಂದ ಭಾರತೀಯ ಹಡಗು ಜಗ್ ಲಾಡ್ಕಿ
- ೬ಜಿ ಮೊಬೈಲ್ ನೆಟ್‌ವರ್ಕ್ ಮಾನದಂಡ ನಿಗದಿಗೆ ಭಾರತ ದೃಢ ಸಂಕಲ್ಪ: ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ
- ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿ: ಪುರುಷರ ಸಿಂಗಲ್ಸ್‌ನಲ್ಲಿ ೧೬ ನೇ ಸುತ್ತಿಗೆ ಮುನ್ನಡೆದ ಭಾರತದ ಆಯುಷ್ ಶೆಟ್ಟಿ.

***************

ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಮತ್ತು ಮುಕ್ತ ಸಂಚಾರವನ್ನು ಖಚಿತಪಡಿಸಿಕೊಳ್ಳುವಾಗ ಈ ಪ್ರದೇಶದಲ್ಲಿ ಶಾಂತಿ, ಭದ್ರತೆ ಮತ್ತು ಸ್ಥಿರತೆಯನ್ನು ಶೀಘ್ರವಾಗಿ ಪುನಃಸ್ಥಾಪಿಸಲು ಭಾರತ ಮತ್ತು ಯುಎಇ ಒಟ್ಟಾಗಿ ಕೆಲಸ ಮಾಡಲು ಒಪ್ಪಿಕೊಂಡಿವೆ.

ನವದೆಹಲಿಯಲ್ಲಿ ನಡೆದ ಪಶ್ಚಿಮ ಏಷ್ಯಾದ ಇತ್ತೀಚಿನ ಬೆಳವಣಿಗೆಗಳ ಕುರಿತು ನಡೆದ ಅಂತರ-ಸಚಿವಾಲಯ ಮಾಹಿತಿ ಸಭೆಯಲ್ಲಿ, ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಪಶ್ಚಿಮ ಏಷ್ಯಾದ ಪರಿಸ್ಥಿತಿಯ ಕುರಿತು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ಮಾತನಾಡಿದ್ದಾರೆ ಎಂದು ಹೇಳಿದರು. ಯುಎಇ ಮೇಲಿನ ದಾಳಿಗಳನ್ನು ಪ್ರಧಾನಿ ಮೋದಿ ತೀವ್ರವಾಗಿ ಖಂಡಿಸಿದರು, ಇದು ಅಮಾಯಕರ ಜೀವಹಾನಿ ಮತ್ತು ನಾಗರಿಕ ಮೂಲಸೌಕರ್ಯಕ್ಕೆ ಹಾನಿಯನ್ನುಂಟು ಮಾಡಿದೆ.

ಟೆಹ್ರಾನ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು ಭಾರತೀಯ ಪ್ರಜೆಗಳಿಗೆ, ವಿಶೇಷವಾಗಿ ವಿದ್ಯಾರ್ಥಿಗಳಿಗೆ, ಅರ್ಮೇನಿಯಾ ಮತ್ತು ಅಜೆರ್ಬೈಜಾನ್‌ಗೆ ಭೂ ಗಡಿಗಳ ಮೂಲಕ ಪ್ರಯಾಣಿಸುವ ಬಗ್ಗೆ ಸಲಹೆಯನ್ನು ನೀಡಿದೆ ಎಂದು ವಕ್ತಾರರು ತಿಳಿಸಿದ್ದಾರೆ. ನಾಗರಿಕರು ತಮ್ಮ ಅನುಕೂಲಕ್ಕೆ ಅನುಗುಣವಾಗಿ ಸುಗಮ ಗಡಿಯಾಚೆಗಿನ ಸಂಚಾರಕ್ಕಾಗಿ ಸಲಹೆಯನ್ನು ಅನುಸರಿಸಲು ಸೂಚಿಸಲಾಗಿದೆ.

***************

ಗುಜರಾತ್‌ನ ಮುಂದ್ರಾ ಬಂದರಿನಲ್ಲಿ ಇಂದು ಬೆಳಿಗ್ಗೆ ಬಂದು ಲಂಗರು ಹಾಕಿದ 'ಜಗ್ ಲಾಡ್ಕಿ' ಎಂಬ ಹೆಸರಿನ ಭಾರತದ ಹಡಗು, ಗಣನೀಯ ಪ್ರಮಾಣದ ಕಚ್ಚಾ ತೈಲವನ್ನು ಹೊತ್ತು ತಂದಿದೆ.

ಯುನೈಟೆಡ್ ಅರಬ್ ಎಮಿರೇಟ್ಸ್‌ನಿಂದ ಸುಮಾರು ಎಂಭತ್ತೊಂದು ಸಾವಿರ ಮೆಟ್ರಿಕ್ ಟನ್‌ನಷ್ಟು ಉತ್ತಮ ಗುಣಮಟ್ಟದ ತೈಲವನ್ನು ಈ ಹಡಗು ಹೊತ್ತು ಭಾರತಕ್ಕೆ ಬಂದಿದೆ. ಮುಂದ್ರಾದಲ್ಲಿ 'ಶಿವಾಲಿಕ್" ಹಡಗು ಮತ್ತು ವಾಡಿನಾರ್ ಬಂದರಿಗೆ ಬಂದ 'ನಂದಾದೇವಿ' ಹಡಗು ಈ ಮೊದಲು ಭಾರತಕ್ಕೆ ಕಚ್ಚಾ ತೈಲವನ್ನು ಹೊತ್ತು ಬಂದಿದ್ದವು.

ಬಂದರಿನ ಅಧಿಕಾರಿಗಳು, ಕಚ್ಚಾ ತೈಲವನ್ನು ಸಂಸ್ಕರಣಾಗಾರಗಳಿಗೆ ವಿತರಿಸಲು ಅನುಕೂಲವಾಗುವಂತೆ ಕಾರ್ಯಾಚರಣೆಗಳನ್ನು ಕೈಗೊಂಡಿದ್ದಾರೆ.

***************

ಲೋಕಸಭೆಯಲ್ಲಿ ಇಂದು ೨೦೨೫ರ ೨ನೇ ಧನ ವಿನಿಯೋಗ ಮಸೂದೆಯನ್ನು ಅಂಗೀಕರಿಸಿತು.

ಈ ಮಸೂದೆಯನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದರು. ೨೦೨೫-೨೬ ರ ಹಣಕಾಸು ವರ್ಷದ ಸೇವೆಗಳಿಗಾಗಿ ಭಾರತದ ಏಕೀಕೃತ ನಿಧಿಯಿಂದ ಮತ್ತು ಅದರಿಂದ ಕೆಲವು ಮೊತ್ತಗಳ ಪಾವತಿ ಮತ್ತು ಹಂಚಿಕೆಗೆ ಅಧಿಕಾರ ನೀಡುವ ಉದ್ದೇಶವನ್ನು ಈ ಮಸೂದೆ ಹೊಂದಿದೆ.

೨೦೨೫ರ ೨ನೇ ಧನ ವಿನಿಯೋಗ ಮಸೂದೆ ಅಂಗೀಕಾರಗೊಳ್ಳುವ ಮೊದಲು, ವಿವಿಧ ಸಚಿವಾಲಯಗಳ ನಿಯಂತ್ರಣದಲ್ಲಿ ೨೦೨೫-೨೬ ರ ಅನುದಾನಗಳ ಬೇಡಿಕೆಗಳಿಗೆ ಚರ್ಚೆ ನಡೆಸದೆ ಲೋಕಸಭೆ ತ್ವರಿತವಾಗಿ ಅನುಮೋದಿಸಿತು.

ಈ ಸಚಿವಾಲಯಗಳಲ್ಲಿ ಗೃಹ, ರಕ್ಷಣೆ, ವಿದೇಶಾಂಗ ವ್ಯವಹಾರಗಳು, ವಿದ್ಯುತ್, ಮಾಹಿತಿ ಮತ್ತು ಪ್ರಸಾರ, ಗ್ರಾಹಕ ವ್ಯವಹಾರಗಳು, ಆರೋಗ್ಯ ಮತ್ತು ನಾಗರಿಕ ವಿಮಾನಯಾನ ವಿಷಯಗಳು ಸೇರಿವೆ.

ಈ ಮಸೂದೆಯ ಮೇಲೆ ವಿರೋಧ ಪಕ್ಷದ ಸದಸ್ಯರು ಮಂಡಿಸಿದ ಕಡಿತದ ನಿರ್ಣಯಗಳನ್ನು ಸದನವು ಧ್ವನಿ ಮತದಿಂದ ನಿರಾಕರಿಸಿತು.

***************

ಆರನೇ ತಲೆಮಾರಿನ - ೬ಜಿ ಮೊಬೈಲ್ ನೆಟ್‌ವರ್ಕ್‌ಗಳಿಗೆ ಮಾನದಂಡಗಳನ್ನು ನಿಗದಿಪಡಿಸುವಲ್ಲಿ ಭಾರತ ದೃಢವಾಗಿ ಕೆಲಸ ಮಾಡುತ್ತಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಎಂ. ಸಿಂಧಿಯಾ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ೬ಜಿ ಪ್ರಮಾಣೀಕರಣದ ಅಂತಾರಾಷ್ಟ್ರೀಯ ಕಾರ್ಯಾಗಾರದ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಅವರು ಇಂದು ಮಾತನಾಡಿರು. ಈ ಕಾರ್ಯಾಗಾರವು ದೂರಸಂಪರ್ಕ ವಲಯದಲ್ಲಿ ಸುಸ್ಥಿರ ಮತ್ತು ಸ್ಪಷ್ಟ ಫಲಿತಾಂಶಗಳನ್ನು ನೀಡುತ್ತದೆ. ೬ಜಿ ಯುಗವು ವೇಗ ಮತ್ತು ಸುರಕ್ಷತೆಯೆಡೆಗಿನ ಜಿಗಿತವನ್ನು ಪ್ರತಿನಿಧಿಸುತ್ತದೆ ಎಂದು ಅವರು ತಿಳಿಸಿದರು.

ಟೆಲಿಕಾಂ ಕ್ಷೇತ್ರದಲ್ಲಿ ದೇಶದ ಪ್ರಗತಿಯನ್ನು ಶ್ಲಾಘಿಸಿದ ಸಚಿವರು, ಕಳೆದ ೧೦ ವರ್ಷಗಳಲ್ಲಿ ದೇಶದಲ್ಲಿ ಡೇಟಾ ವೆಚ್ಚಗಳು ಶೇಕಡಾ ೯೬ ರಷ್ಟು ಕುಸಿದಿವೆ ಎಂದರು. ಒಂದು ತಿಂಗಳಲ್ಲಿ ೨೦ ಶತಕೋಟಿ ಡಿಜಿಟಲ್ ವಹಿವಾಟುಗಳೊಂದಿಗೆ, ಭಾರತವು ಪ್ರಪಂಚದಾದ್ಯಂತ ಮುಂಚೂಣಿಯಲ್ಲಿದೆ ಎಂದು ಸಚಿವ ಸಿಂಧಿಯಾ ಹರ್ಷ ವ್ಯಕ್ತಪಡಿಸಿದರು.

***************

ಒಂದು ರಾಷ್ಟ್ರ, ಒಂದು ಚುನಾವಣೆಗೆ ಸಂಬಂಧಿಸಿದ ಶಾಸನಗಳನ್ನು ಪರಿಶೀಲಿಸುವ ಜಂಟಿ ಸಂಸದೀಯ ಸಮಿತಿಯ ಅವಧಿಯನ್ನು ಲೋಕಸಭೆ ವಿಸ್ತರಿಸಿದೆ.

ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಿಗೆ ಏಕಕಾಲದಲ್ಲಿ ಚುನಾವಣೆಗಳನ್ನು ಪರಿಚಯಿಸಲು ಪ್ರಯತ್ನಿಸುತ್ತಿರುವ ಮಸೂದೆಯ ಕುರಿತಾದ ಈ ಸಮಿತಿಯ ಅವಧಿಯನ್ನು ೨೦೨೬ ರ ಮಳೆಗಾಲದ ಅಧಿವೇಶನದ, ಕೊನೆಯ ವಾರದ, ಮೊದಲ ದಿನದವರೆಗೆ ಲೋಕಸಭೆ ವಿಸ್ತರಿಸಿದೆ.

ಸಂವಿಧಾನದ ಜಂಟಿ ಸಮಿತಿ (೧೨೯ ನೇ ತಿದ್ದುಪಡಿ) ಮಸೂದೆ, ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, ೨೦೨೪ ರ ಅವಧಿಯನ್ನು ವಿಸ್ತರಿಸುವ ಪ್ರಸ್ತಾವನೆಯನ್ನು ಸಮಿತಿಯ ಅಧ್ಯಕ್ಷ ಪಿ.ಪಿ. ಚೌಧರಿ ಮಂಡಿಸಿದರು. ಈ ಪ್ರಸ್ತಾವನೆಯನ್ನು ಸದನದಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

***************

ನೂರು ಪ್ಲಗ್-ಅಂಡ್-ಪ್ಲೇ ಕೈಗಾರಿಕಾ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲು ಭಾರತ್ ಸರ್ಕಾರಿ ವಿಕಾಸ ಯೋಜನೆಯನ್ನು ೩೩ ಸಾವಿರದ ೬೬೦ ಕೋಟಿ ರೂಪಾಯಿಗಳ ಹಂಚಿಕೆಯೊಂದಿಗೆ ಕೇಂದ್ರ ಸಚಿವ ಸಂಪುಟ ಇಂದು ಅನುಮೋದಿಸಿದೆ.

ಸಂಪುಟ ಸಭೆಯ ನಂತರ ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯು ವಿಶ್ವ ದರ್ಜೆಯ ಕೈಗಾರಿಕಾ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಹೊಂದಿದೆ. ದೇಶದ ಉತ್ಪಾದನಾ ಸಾಮರ್ಥ್ಯವನ್ನು ಇದು ಹೆಚ್ಚಿಸಿ ದೇಶದ ಬೆಳವಣಿಗೆಯನ್ನು ಮುನ್ನಡೆಸುತ್ತದೆ ಎಂದು ಹೇಳಿದರು.

೧೦೦ ರಿಂದ ೧೦೦೦ ಎಕರೆ ವಿಸ್ತೀರ್ಣದ ಕೈಗಾರಿಕಾ ಪಾರ್ಕ್‌ಗಳನ್ನು ಎಕರೆಗೆ ಒಂದು ಕೋಟಿ ರೂಪಾಯಿಗಳವರೆಗಿನ ಬೆಂಬಲದೊಂದಿಗೆ ಅಭಿವೃದ್ಧಿಪಡಿಸಲಾಗುವುದು ಎಂದು ಅವರು ಹೇಳಿದರು.

ರೈತರ ಕಲ್ಯಾಣವನ್ನು ಬಲಪಡಿಸುವ ಮತ್ತು ಆತ್ಮನಿರ್ಭರ ಭಾರತದ ದೃಷ್ಟಿಕೋನವನ್ನು ಮುನ್ನಡೆಸುವ ಮಹತ್ವದ ಹೆಜ್ಜೆಯಾಗಿ, ೨೦೨೩-೨೪ ರ ಹತ್ತಿ ಖುತುವಿಗಾಗಿ ಭಾರತ ಹತ್ತಿ ನಿಗಮಕ್ಕೆ ೧ ಸಾವಿರದ ೭೧೮ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಕನಿಷ್ಠ ಬೆಂಬಲ ಬೆಲೆ- ಎಂಎಸ್‌ಪಿ ನಿಧಿಯನ್ನು ಸಚಿವ ಸಂಪುಟ ಅನುಮೋದಿಸಿದೆ. ಈ ನಿಧಿಯು ದೇಶಾದ್ಯಂತ ಹತ್ತಿ ರೈತರಿಗೆ ನೇರ ಬೆಲೆ ಬೆಂಬಲವನ್ನು ಒದಗಿಸುವ ಗುರಿಯನ್ನು ಹೊಂದಿದೆ ಎಂದು ಸಚಿವ ವೈಷ್ಣವ್ ಹೇಳಿದರು.

***************

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಪುರುಷರ ಸಿಂಗಲ್ಸ್‌ನಲ್ಲಿ ಆಯುಷ್ ಶೆಟ್ಟಿ ೧೬ ನೇ ಸುತ್ತಿಗೆ ಮುನ್ನಡೆದಿದ್ದಾರೆ.

ಇಂದು ಸಂಜೆ ನಡೆದ ೩೨ನೇ ಸುತ್ತಿನ ಪಂದ್ಯದಲ್ಲಿ ಆಯುಷ್ ಶೆಟ್ಟಿ, ಭಾರತದ ಮತ್ತೊಬ್ಬ ಆಟಗಾರ ಕಿರಣ್ ಜಾರ್ಜ್ ಅವರನ್ನು ಸೋಲಿಸಿದರು. ಪುರುಷರ ಡಬಲ್ಸ್‌ನಲ್ಲಿ, ಭಾರತದ ಅರ್ಜುನ್ ಮದತಿಲ್ ರಾಮಚಂದ್ರನ್ ಮತ್ತು ಹರಿಹರನ್ ಅಮ್ಸಕರುಣನ್ ಕೂಡ ೧೬ನೇ ಸುತ್ತಿಗೆ ತಲುಪಿದ್ದಾರೆ.

ಇದಕ್ಕೂ ಮೊದಲು, ೩೨ನೇ ಸುತ್ತಿನ ಪಂದ್ಯದಲ್ಲಿ, ಕಿದಂಬಿ ಶ್ರೀಕಾಂತ್ ಡೆನ್ಮಾರ್ಕ್‌ನ ಮ್ಯಾಗ್ನಸ್ ಜೋಹಾನ್ಸೆನ್ ವಿರುದ್ಧ ೧೨-೨೧, ೧೦-೨೧ ಅಂತರದಲ್ಲಿ ಸೋತರು.

***************

ಮಧ್ಯಪ್ರದೇಶದ ಇಂದೋರ್‌ನ ತಿಲಕ್ ನಗರ ಪೊಲೀಸ್ ಠಾಣೆ ಪ್ರದೇಶದಲ್ಲಿ ಇಂದು ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಏಳು ಮಂದಿ ಸಾವನ್ನಪ್ಪಿದ್ದಾರೆ.

ಬೆಳಗಿನ ಜಾವ ಮೂರು ಅಂತಸ್ತಿನ ಮನೆಯಲ್ಲಿ ಭಾರಿ ಬೆಂಕಿ ಕಾಣಿಸಿಕೊಂಡಿದೆ. ಮನೆಯ ಹೊರಗೆ ಚಾರ್ಜ್ ಆಗುತ್ತಿದ್ದ ಎಲೆಕ್ಟ್ರಿಕ್ ಕಾರಿನಲ್ಲಿ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಬೆಂಕಿ ಕಾಣಿಸಿಕೊಂಡಿದ್ದು, ಸ್ಫೋಟ ಸಂಭವಿಸಿದೆ. ಬೆಂಕಿಯ ಜ್ವಾಲೆ ಹೆಚ್ಚಾಗುತ್ತಿದ್ದಂತೆಯೇ ಮನೆಯೊಳಗೆ ಇರಿಸಲಾಗಿದ್ದ ನಾಲ್ಕು ಎಲ್‌ಪಿಜಿ ಸಿಲಿಂಡರ್‌ಗಳು ಒಂದರ ನಂತರ ಒಂದರಂತೆ ಸ್ಫೋಟಗೊಂಡು ಕಟ್ಟಡದ ಒಂದು ಭಾಗ ಕುಸಿದಿದೆ.

ಈ ಅಗ್ನಿ ಅವಘಡದ ಬಗ್ಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ ಹಾಗೂ ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದು, ಗಾಯಾಳುಗಳ ಚೇತರಿಕೆಗೆ ಪ್ರಾರ್ಥಿಸಿದ್ದಾರೆ. ಮೃತರ ಕುಟುಂಬಗಳಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಎರಡು ಲಕ್ಷ ರೂಪಾಯಿ ಮತ್ತು ಎರಡೂ ಘಟನೆಗಳಲ್ಲಿ ಗಾಯಗೊಂಡವರಿಗೆ ಐವತ್ತು ಸಾವಿರ ರೂಪಾಯಿಗಳ ಪರಿಹಾರವನ್ನು ಘೋಷಿಸಲಾಗಿದೆ.

***************

ಕಚ್ಚಾ ತೈಲ ಲಭ್ಯತೆ ಸಾಮಾನ್ಯವಾಗಿದೆ ಮತ್ತು ಸಂಸ್ಕರಣಾಗಾರಗಳು ಗರಿಷ್ಠ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಸರ್ಕಾರ ಭರವಸೆ ನೀಡಿದೆ.

ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ನವದೆಹಲಿಯಲ್ಲಿಂದು ನಡೆದ ಅಂತರ-ಸಚಿವಾಲಯ ಮಾಹಿತಿ ಸಭೆಯಲ್ಲಿ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಈ ಮಾಹಿತಿಯನ್ನು ಹಂಚಿಕೊಂಡರು. ದೇಶೀಯ ಎಲ್‌ಪಿಜಿ ಉತ್ಪಾದನೆಯು ಶೇಕಡಾ ೪೦ ರಷ್ಟು ಹೆಚ್ಚಾಗಿದೆ ಮತ್ತು ದೇಶಾದ್ಯಂತ ಯಾವುದೇ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಯಾವುದೇ ಕೊರತೆ ವರದಿಯಾಗಿಲ್ಲ ಎಂದು ಅವರು ಹೇಳಿದರು.

ದೀರ್ಘಾವಧಿಯಲ್ಲಿ ಎಲ್‌ಪಿಜಿಯಿಂದ ಪಿಎನ್‌ಜಿಗೆ ಪರಿವರ್ತನೆಗೊಳ್ಳುವ ಬೆಂಬಲಕ್ಕೆ ಒಳಪಟ್ಟು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ವಾಣಿಜ್ಯ ಎಲ್‌ಪಿಜಿಯ ಶೇಕಡಾ ೧೦ ರಷ್ಟು ಹೆಚ್ಚುವರಿ ಹಂಚಿಕೆಯನ್ನು ಸರ್ಕಾರ ನೀಡಿದೆ ಎಂದು ಅವರು ಹೇಳಿದರು. ಪ್ರಮುಖ ನಗರಗಳು ಮತ್ತು ನಗರ ಪ್ರದೇಶಗಳಲ್ಲಿನ ವಾಣಿಜ್ಯ ಎಲ್‌ಪಿಜಿ ಗ್ರಾಹಕರನ್ನು ಪಿಎನ್‌ಜಿಗೆ ಪರಿವರ್ತಿಸಲು ಸರ್ಕಾರ ಒತ್ತಾಯಿಸಿದೆ ಎಂದು ಅವರು ತಿಳಿಸಿದರು.

*******ಮುಕ್ತಾಯ********